ಕರ್ನಾಟಕ ಸರ್ಕಾರ

ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ ಬೆಂಗಳೂರು 01

ಸಂಖ್ಯೆ: ಇಇಡಿಎಸ್ /ಶಿಕ್ಷಕ ಮಿತ್ರ/2020-21 ದಿನಾಂಕ:31-05-2023

-:ಅಂತಿಮ ನೆನಪೋಲೆ:-

ವಿಷಯ:- ಇ ಇ ಡಿ ಎಸ್ ತಂತ್ರಾಂಶದಲ್ಲಿ ಶಿಕ್ಷಕರ ಸೇವಾವಿವರಗಳನ್ನು ಇಂದೀಕರಿಸಿ ಅಂತಿಮಗೊಳಿಸುವ ಬಗ್ಗೆ.

ಉಲ್ಲೇಖ:- ಸರ್ಕಾರದ ಆದೇಶ ಸಂಖ್ಯೆ:-ಇಪಿ 03 ಇಟಿಆರ್ 2023 ದಿನಾಂಕ:-31-05-2023

ಈ ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಈ ಮೂಲಕ ಬಟವಾಡೆ ಅಧಿಕಾರಿಗಳಾದ ಪ್ರೌಢಶಾಲಾ ಮುಖ್ಯೋಪಾಧ್ಯಾಯರು ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಕಛೇರಿ ಮುಖ್ಯಸ್ಥರುಗಳಿಗೆ ಈ ಮೂಲಕ ಸೂಚಿಸುವುದೇನೆಂದರೆ ಕರ್ನಾಟಕ ವಿಧಾನ ಸಭಾ ಚುನಾವಣೆ ಹಿನ್ನೆಲೆಯಲ್ಲಿ ಸ್ಥಗಿತಗೊಳಿಸಲಾಗಿದ್ದ ಶಿಕ್ಷಕರ ವರ್ಗಾವಣೆಗಳನ್ನು ಈಗ ಪುನರ್ ಚಾಲನೆಗೊಳಿಸಲಾಗುತ್ತಿದ್ದು ಶಿಕ್ಷಕರ ಇತ್ತೀಚಿನ ಸೇವಾ ವಿವರಗಳನ್ನು ಅವರ ಸೇವಾ ವಹಿಯಂತೆ ಪರಿಶೀಲಿಸಿ ಇ ಇ ಡಿ ಎಸ್ ತಂತ್ರಾಂಶದಲ್ಲಿ ಇಂದೀಕರಿಸಿ ಅಂತಿಮಗೊಳಿಸಬೇಕಾದ ಅನಿವಾರ್ಯತೆ ಇರುತ್ತದೆ.

ಈ ಹಿನ್ನೆಲೆಯಲ್ಲಿ ಈ ಕೆಳಕಂಡ ಅಂಶಗಳನ್ನೊಳಗೊಂಡ ಶಿಕ್ಷಕರ ಸೇವಾ ವಿವರಗಳನ್ನು ಮತ್ತೊಮ್ಮೆ ಪರಿಶೀಲಿಸಿ ನಿಖರವಾದ ಸೇವಾ ವಿವರಗಳನ್ನು ಇಇಡಿಎಸ್ ತಂತ್ರಾಂಶದಲ್ಲಿ ಇಂದೀಕರಿಸಲು ಮತ್ತೊಮ್ಮೆ ಸೂಚಿಸಲಾಗಿದೆ.

1. ಶಿಕ್ಷಕರ ಕ್ರಮಬದ್ಧವಾದ ಕೆ ಜಿ ಐ ಡಿ ಸಂಖ್ಯೆ ನಮೂದಾಗಿರುವ ಬಗ್ಗೆ.
2. ಶಿಕ್ಷಕರ ಹೆಸರು ಕ್ರಮಬದ್ಧವಾಗಿ ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿರುವ ಬಗ್ಗೆ
3. ಶಿಕ್ಷಕರ ಜನ್ಮ ದಿನಾಂಕ, ಸೇವೆಗೆ ಸೇರಿದ ದಿನಾಂಕ, ಪ್ರಸ್ತುತ ವೃಂದಕ್ಕೆ ಸೇರಿದ ದಿನಾಂಕ.
4. ಶಿಕ್ಷಕರ ಸೇವಾ ವಿವರದಲ್ಲಿ ಯಾವುದೇ ಕಲಂ ಖಾಲಿ ಉಳಿಯಬಾರದು.
5. ಅನುದಾನಿತ ಶಿಕ್ಷಕರನ್ನು ಸರ್ಕಾರಿ ಶಾಲಾ ಶಿಕ್ಷಕರೆಂದು ನಮೂದಾಗಿದ್ದಲ್ಲಿ ಪರಿಶೀಲಿಸಿ ಸರಿಪಡಿಸಬೇಕು.
6. ಪ್ರಾಥಮಿಕ ಶಾಲಾ ಶಿಕ್ಷಕರನ್ನು ಪ್ರೌಢಶಾಲಾ ಶಿಕ್ಷಕರೆಂದು ನಮೂದಾಗಿದ್ದಲ್ಲಿ ಪರಿಶೀಲಿಸಿ ಸರಿಪಡಿಸಬೇಕು
7. ಕಾರ್ಯನಿರ್ವಹಿಸುತ್ತಿರುವ ವಲಯ ( ಎ ಬಿ ಸಿ ಜೋನ್ )ಪರಿಶೀಲಿಸಬೇಕು
8. ಶಿಕ್ಷಕರ ಆದ್ಯತೆಗಳ (EXEMPTION) ಪರಿಶೀಲಿಸಿ ಇಂದೀಕರಣ ಅವಶ್ಯವಿದ್ದಲ್ಲಿ ಇಂದೀಕರಿಸುವುದು.
9. ಕಾರ್ಯನಿರ್ವಹಿಸುತ್ತಿರುವ ಶಾಲೆಯಲ್ಲಿ ಮ್ಯಾಪಿಂಗ್ ಆಗಿರುವ ಬಗ್ಗೆ.

10. ಶಿಕ್ಷಕರ ಬೋಧನಾ ವಿಷಯ ನೇಮಕಾತಿ ಆದೇಶದಂತೆ ನಮೂದಾಗಿರಬೇಕು, ಖಾಯಂಪೂರ್ವ ಅವಧಿ ಘೋಷಣೆ ಮಾಹಿತಿ ನಮೂದಾಗಿರಬೇಕು ಮತ್ತು SPOUSE DETAILS ನಮೂದಾಗಿರಬೇಕು.
11. ನಿವೃತ್ತಿ ಹೊಂದಿದವರನ್ನು ತಂತ್ರಾಂಶದಿಂದ EXIT ಮಾಡಿರಬೇಕು
12. ಸಸ್ಪೆಂಡ್ ಆಗಿರುವ ಶಿಕ್ಷಕರ ಮಾಹಿತಿಯನ್ನು ಅವರ ಸೇವಾ ವಿವರದಲ್ಲಿ ನಮೂದಿಸಿರಬೇಕು. ಹಾಗೂ ಇನ್ನಿತರ ಪ್ರಮುಖ ಸೇವಾ ವಿವರಗಳನ್ನು ಪರಿಶೀಲಿಸಿ ಇಂದೀಕರಿಸಬೇಕು.

ಆದ್ದರಿಂದ ಇಲಾಖೆಯ ಬಟವಾಡೆ ಅಧಿಕಾರಿಗಳಾದ ಪ್ರೌಢಶಾಲಾ ಮುಖ್ಯೋಪಾಧ್ಯಾಯರು ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಎಲ್ಲಾ ಕಛೇರಿಗಳ ಮುಖ್ಯಸ್ಥರು ತಮ್ಮ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ/ಅಧಿಕಾರಿಗಳ ಸೇವಾವಹಿಗಳನ್ನು ಪರಿಶೀಲಿಸಿ ನಿಖರ ಮಾಹಿತಿಗಳನ್ನು ದಿನಾಂಕ:–03/06/2023 ರೊಳಗೆ ಇಇಡಿಎಸ್ ತಂತ್ರಾಂಶದಲ್ಲಿ ಇಂದೀಕರಿಸಿ ಅಂತಿಮಗೊಳಿಸಿರುವ ಬಗ್ಗೆ ಖುದ್ದು ಪರಿಶೀಲಿಸಿ ಖಚಿತಪಡಿಸಲು ಸೂಚಿಸಿದೆ.
ಮುಂದುವರೆದು ನಿಖರ ಸೇವಾ ವಿವರಗಳನ್ನು ಇಂದೀಕರಿಸದೇ ಮುಂದಿನ ದಿನಗಳಲ್ಲಿ ವ್ಯತ್ಯಾಸಗಳಾದಲ್ಲಿ ಸಂಬಂದಿಸಿದ ಬಟವಾಡೆ ಅಧಿಕಾರಿಗಳನ್ನೇ ಹೊಣೆಗಾರರನ್ನಾಗಿಸಲಾಗುವುದು. ಹಾಗೂ ತದನಂತರದಲ್ಲಿ ಬದಲಾವಣೆಗೆ ಸಂಬಂಧಿಸಿದಂತೆ ಬರುವ ಮನವಿಗಳನ್ನು ಪರಿಗಣಿಸಲಾಗುವುದಿಲ್ಲ.
ಈ ಬಗ್ಗೆ ಜಿಲ್ಲಾ ಉಪನಿರ್ದೇಶಕರು ಪರಿಶೀಲನಾ ವರದಿಯನ್ನು ದಿನಾಂಕ:–03/06/2023ರೊಳಗೆ ಈ ಕಛೇರಿಗೆ ಸಲ್ಲಿಸುವಂತೆ ತಿಳಿಸಿದೆ.

ಬಿ ಬಿ ಕಾವೇರಿ., ಭಾ.ಆ.ಸೇ,
ಆಯುಕ್ತರು
ಶಾಲಾ ಶಿಕ್ಷಣ ಇಲಾಖೆ

ಗೆ,
ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ)
ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ/ಪ್ರೌಢಶಾಲಾ ಮುಖ್ಯೋಪಾಧ್ಯಾಯರಿಗೆ/
ಕಛೇರಿ ಮುಖ್ಯಸ್ಥರುಗಳಿಗೆ

ಪ್ರತಿಗಳು:–
1. ರಾಜ್ಯ ಯೋಜನಾ ನಿರ್ದೇಶಕರು, ಎಸ್.ಎಸ್.ಕೆ ರವರಿಗೆ ಮಾಹಿತಿಗಾಗಿ
2. ರಾಜ್ಯದ ಎಲ್ಲಾ ನಿರ್ದೇಶಕರುಗಳಿಗೆ ಮಾಹಿತಿಗಾಗಿ
3. ಕಛೇರಿ ಪ್ರತಿ.